**Bangalore**
**Regional News**
**12.08.2024 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಮಾನವ-ವನ್ಯಜೀವಿ ಸಂಘರ್ಷ ತಪ್ಪಿಸಲು ೫೦ ಸಾವಿರ ಎಕರೆ ಕೃಷಿ ಭೂಮಿಗೆ ಸೌರಬೇಲಿ ಅಳವಡಿಕೆ- ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯದಲ್ಲಿ ಮುಂದುವರಿದ 'ಹರ್ ಘರ್ ತಿರಂಗಾ' ಯಾತ್ರೆ ; ರಾಷ್ಟ್ರಾಭಿಮಾನ ಮೂಡಿಸುವ ಪ್ರಯತ್ನಕ್ಕೆ ಉತ್ತಮ ಸ್ಪಂದನೆ

೩. ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ - ಸಚಿವ ಮಧುಬಂಗಾರಪ್ಪ

೪. ಬೆಂಗಳೂರಿನ ಭಾರತೀಯ ವಿಜ್ಞಾನ ಮಂದಿರದಲ್ಲಿ ರಾಷ್ಟ್ರೀಯ ಬಾಹ್ಯಾಕಾಶ ದಿನ ಕುರಿತ ಕಾರ್ಯಾಗಾರ

**<><*<><>*><>**

ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆಯಿಂದ ವಿಶ್ವ ಆನೆ ದಿನವಾದ ಇಂದು ಆಯೋಜಿಸಿದ್ದ ಮಾನವ-ಆನೆ ಸಂಘರ್ಷ ನಿರ್ವಹಣೆ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದರು.ನಂತರ ಮಾತನಾಡಿದ ಮುಖ್ಯಮಂತ್ರಿ, ಮಾನವ-ಆನೆ ಸಂಘರ್ಷ ತಪ್ಪಿಸಲು ಸರ್ಕಾರ ಬದ್ಧವಾಗಿದೆ. ಸೌರ ವಿದ್ಯುತ್ ಬೇಲಿ ಅಳವಡಿಸುವ ಪ್ರಕ್ರಿಯೆಗೆ ಉತ್ತಮ ಸ್ಪಂದನೆ ದೊರೆತಿದ್ದು, ಈವರೆಗೆ ೫೦ ಸಾವಿರ ಎಕರೆ ಕೃಷಿ ಭೂಮಿಯನ್ನು ಸೌರವಿದ್ಯುತ್ ಬೆಲಿಯ ಮೂಲಕ ಸಂರಕ್ಷಿಸಲಾಗಿದೆ. ಇದರಿಂದ ರೈತರ ಜೀವನೋಪಾಯ ರಕ್ಷಣೆ ಜೊತೆಗೆ ಮಾನವ ಮತ್ತು ವನ್ಯಜೀವಿ ಸಂಘರ್ಷ ತಪ್ಪಿಸಿದಂತಾಗಿದೆ ಎಂದರು. ಸಂಘರ್ಷ ತಪ್ಪಿಸಲು ಅರಣ್ಯ ಇಲಾಖೆ, ಅತ್ಯಾಧುನಿಕ ತಂತ್ರಜ್ಞಾನ ಬಳಸುತ್ತಿದ್ದು, ಅರಣ್ಯ ಇಲಾಖೆ ಎಲ್ಲ ರೀತಿಯಲ್ಲೂ ಸರ್ವಸನ್ನದ್ಧವಾಗಿದೆ. ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಗೆ ವ್ಯಾಪಕ ಕ್ರಮಗಳನ್ನು ಸರ್ಕಾರ ಕೈಗೊಳ್ಳುತ್ತಿದೆ. ಪ್ರತಿಯೊಂದು ಜಿಲ್ಲೆಯಲ್ಲೂ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳ ನೇತೃತ್ವದಲ್ಲಿ ಆನೆ ರಕ್ಷಣಾ ಕಾರ್ಯಪಡೆ ರಚಿಸಲಾಗಿದ್ದು, ಈ ಮೂಲಕ ಪ್ರತಿವರ್ಷ ೧ ಸಾವಿರದ ೨೦೦ ಸಂಘರ್ಷಗಳಿಗೆ ಸೂಕ್ತ ರೀತಿಯಲ್ಲಿ ಸ್ಪಂದಿಸುತ್ತಿದೆ ಎಂದು ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಪೊನ್ನಣ್ಣ, ಕೇರಳ, ತಮಿಳುನಾಡು, ತೆಲಂಗಾಣ ಮತ್ತು ಜಾರ್ಖಂಡ್ ಅರಣ್ಯ ಸಚಿವರು ಹಾಗೂ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

**<><*<><>*><>**

ದೇಶದ ಬಗ್ಗೆ ಗೌರವ, ಅಭಿಮಾನ, ಹೆಮ್ಮೆ ಪ್ರತಿಯೊಬ್ಬರಲ್ಲೂ ಸದಾ ಜಾಗೃತವಾಗಿರಲಿ ಎಂಬ ಉದ್ದೇಶದಿಂದ 'ಹರ್ ಘರ್ ತಿರಂಗಾ' ಅಭಿಯಾನವನ್ನು ಆರಂಭಿಸಲಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು. ಅವರು ಶಿರಸಿಯಲ್ಲಿ ಹರ ಘರ ತಿರಂಗ ಅಭಿಯಾನಕ್ಕೆ ಮಹಾತ್ಮಾ ಗಾಂಧಿ  ಹಾಗೂ ಛತ್ರಪತಿ ಶಿವಾಜಿ ಪ್ರತಿಮೆಗಳನ್ನು ಸ್ವಚ್ಛಗೊಳಿಸುವ ಮೂಲಕ  ಚಾಲನೆ ನೀಡಿ  ಮಾತನಾಡಿದರು.

ಧ್ವನಿ: ವಿಶ್ವೇಶ್ವರ ಹೆಗಡೆ ಕಾಗೇರಿ, ಸಂಸದ

ಹರ್ ಗರ್ ತಿರಂಗಾ ಕಾರ್ಯಕ್ರಮದ ಅಂಗವಾಗಿ ವಿಜಯನಗರ ಜಿಲ್ಲಾಡಳಿತದಿಂದ ಜಿಲ್ಲೆಯ ಕಲಾವಿದರುಗಳಿಗೆ ದೇಶಭಕ್ತಿ ಗೀತೆಗಳ ಸರ್ಧೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕ ಸಿದ್ಧಲಿಂಗೇಶ್ವರ ರಂಗಣ್ಣನವರ್ ತಿಳಿಸಿದ್ದಾರೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಉಪ ನಿರ್ದೇಶಕರನ್ನು ಸಂಪರ್ಕಿಸಲು ಕೋರಲಾಗಿದೆ. ಕರ್ನಾಟಕ ಅಂಚೆ ವೃತ್ತದಿಂದ ಬೆಂಗಳೂರಿನ ಮಿಲ್ಲರ್ಸ್ ರಸ್ತೆಯ ಮೇಲ್ ಮೋಟರ್ಸ್ ಸರ್ವಿಸ್ ವಿಭಾಗದಿಂದ ಇಂದು ಹರ್ ಘರ್ ತಿರಂಗಾ ಯಾತ್ರೆ ಅಂಗವಾಗಿ ಪಾರಂಪರಿಕಾ ನಡೆಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

**<><*<><>*><>**

ತುಮಕೂರು ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಫಲಿತಾಂಶ ಕುಂಠಿತವಾಗಲು ಶಿಕ್ಷಕರ ಕೊರತೆ ಹೆಚ್ಚಿರುವುದು ಕಾರಣವಾಗಿದ್ದು, ಶಿಕ್ಷಕರ ಹುದ್ದೆ ಭರ್ತಿ ಮಾಡುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರಿಗೆ ಮನವಿ ಮಾಡಿದರು. ತುಮಕೂರು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಪಂಚಾಯತಿ ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರ ಸರ್ಕಾರಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಅವಕಾಶ ಕಲ್ಪಿಸಿದೆ ಆದರೆ ಅನುದಾನಿತ ಶಾಲೆಗಳಲ್ಲಿ ಒಬ್ಬನೇ ಶಿಕ್ಷಕ ಎಲ್ಲವನ್ನು ನಿಭಾಯಿಸಬೇಕಾದ ಪರಿಸ್ಥಿತಿ ಇದೆ ಎಂದರು. ಸಹಕಾರ ಸಚಿವ ಕೆ.ಎನ್.ರಾಜಣ್ಣ ಮಾತನಾಡಿ, ಫಲಿತಾಂಶ ಕುಸಿಯಲು ಶಿಕ್ಷಕರ ಕೊರತೆ ಕಾರಣವಾಗಿದೆ ಎಂದರು. ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಇಲಾಖೆ ಬದ್ಧವಾಗಿದ್ದು, ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಮುಂದಾಗಿದ್ದು, ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲಾಗುತ್ತಿದೆ ಎಂದರು. ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಮಾತನಾಡಿ, ಪಾವಗಡದಲ್ಲಿ ಶಿಕ್ಷಣ ಕ್ಷೇತ್ರ ಕುಂಠಿತವಾಗಿದ್ದು, ಮೂಲಸೌಕರ್ಯಕ್ಕೆ ಆದ್ಯತೆ ನೀಡಬೇಕು ಎಂದರು.

**<><*<><>*><>**

ಬೆಂಗಳೂರಿನ ವಿವಿಧ ಭಾಗಗಳಲ್ಲಿ ಮಳೆ ಸಂಬಂಧಿತ ಸಮಸ್ಯೆಗಳಿಗೆ ತುರ್ತು ಪರಿಹಾರಕ್ಕಿಂತ ದೀರ್ಘಕಾಲೀನ ಹಾಗೂ ಶಾಶ್ವತ ಪರಿಹಾರ ಕಾಮಗಾರಿಗಳನ್ನು ಕೈಗತ್ತಿಕೊಳ್ಳಬೇಕೆಂದು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರು ನಗರದಲ್ಲಿ ಮೂರರಿಂದ ಐದುವರ್ಷಗಳ ಅವಧಿಗೆ ಪೂರ್ಣಕಾಲಿಕ ಚುನಾಯಿತ ಮೇಯರ್‌ಗಳನ್ನು ಆಯ್ಕೆ ಮಾಡುವ ಅಗತ್ಯವಿದೆ. ಅಧಿಕಾರಿಗಳಲ್ಲಿ ಮತ್ತಷ್ಟು ಜವಾಬ್ದಾರಿ ಮೂಡಿಸಬೇಕಾಗಿದೆ ಎಂದು ಹೇಳಿದರು.

<><*<><>*><>

ಬೆಂಗಳೂರಿನಲ್ಲಿ ಮಳೆ ಸಂಬಂಧಿತ ಸಮಸ್ಯೆಗಳ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ನಗರದ ವಿವಿಧೆಡೆ ಪರಿಶೀಲನೆ ನಡೆಸುತ್ತಿದ್ದಾರೆ. ಹೆಬ್ಬಾಳ ಮೇಲ್ಸೇತುವೆ ಬಳಿ ಉಂಟಾಗಿರುವ ಸಮಸ್ಯೆಯನ್ನು ಪರಿಶೀಲಿಸಿದ ಅವರು, ನಂತರ ಹೆಚ್.ಎಸ್.ಆರ್.ಲೇಔಟ್, ಬಾಣಸವಾಡಿ ಆಸ್ಪತ್ರೆ, ಸಿಲ್ಕ್ ಬೋರ್ಡ್ ಜಂಕ್ಷನ್, ಜಯದೇವ ಆಸ್ಪತ್ರೆ ಮತ್ತು ಕೆ.ಆರ್.ಮಾರುಕಟ್ಟೆ ಭಾಗದಲ್ಲಿ ಉಂಟಾಗಿರುವ ಸಮಸ್ಯೆಗಳನ್ನು ಆಲಿಸಲಿದ್ದಾರೆ.

<><*<><>*><>

ಭಾರತವು ಚಂದ್ರನ ಮೇಲೆ ಇಳಿದ ನಾಲ್ಕನೇ ದೇಶವಾಗಿದ್ದು, ೨೦೨೩ರ ಆಗಸ್ಟ್ ೨೩ ರಂದು ಚಂದ್ರನ ದಕ್ಷಿಣ ಧೃವ ಪ್ರದೇಶವನ್ನು ತಲುಪಿದ ಮೊದಲ ದೇಶವಾಗಿದೆ. ಈ ಮಹತ್ವದ ಸಾಧನೆಯನ್ನು ಗೌರವಿಸಲು ಪ್ರಧಾನಿ ನರೇಂದ್ರ ಮೋದಿ ಆಗಸ್ಟ್ ೨೩ರನ್ನು ರಾಷ್ಟ್ರೀಯ ಬಾಹ್ಯಾಕಾಶ ದಿನ ಎಂದು ಘೋಷಿಸಿದ್ದರು. ಭಾರತ ಇದೇ ೨೩ ರಂದು ಮೊಟ್ಟ ಮೊದಲ ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸಲಿದ್ದು, 'ಚಂದ್ರನನ್ನು ಸ್ಪರ್ಶಿಸುವಾಗ ಜೀವನವನ್ನು ಸ್ಪರ್ಶಿಸುವುದು, ಭಾರತದ ಬಾಹ್ಯಾಕಾಶ 'ಯಶೋಗಾಥೆ' ಎಂಬ ವಿಷಯದೊಂದಿಗೆ ರಾಷ್ಟ್ರೀಯ ದಿನ ಆಚರಿಸಲಿದೆ. ಬಾಹ್ಯಾಕಾಶ ರಂಗದಲ್ಲಿ ಭಾರತದ ಗಮನಾರ್ಹ ಸಾಧನೆಗಳು ಸಮಾಜಕ್ಕೆ ಆಳವಾದ ಪ್ರಯೋಜನಗಳು, ಬಾಹ್ಯಾಕಾಶ ಕಾರ್ಯಕ್ರಮದೊಂದಿಗೆ ತೊಡಗಿಸಿಕೊಳ್ಳಲು ಎಲ್ಲ ಹಂತಗಳ ಜನರಿಗೆ ಅವಕಾಶ ಕಲ್ಪಿಸುವ ಅಸಂಖ್ಯಾತ ಘಟನೆಗಳು ಈ ಸಂದರ್ಭದಲ್ಲಿ ತೆರೆದುಕೊಳ್ಳುತ್ತದೆ.

ಬಾಹ್ಯಾಕಾಶ ದಿನದ ಆಚರಣೆಯ ಕಾರ್ಯಕ್ರಮವು ಇದೇ ೨೨ ಮತ್ತು ೨೩ರಂದು ನವದೆಹಲಿಯಲ್ಲಿ ಸಮಾಪನಗೊಳ್ಳಲಿದೆ.

<><*<><>*><>

ರಾಜ್ಯ ಜಲಸಂಪನ್ಮೂಲಕ ಇಲಾಖೆ, ರಾಷ್ಟ್ರೀಯ ಜಲಜನಕ ಯೋಜನೆಯಿಂದ ಐಸಿಡಬ್ಲ್ಯು ಎಆರ್ ಸಹಯೋಗದೊಂದಿಗೆ ಬೆಂಗಳೂರಿನ ಭಾರತೀಯ ವಿಜ್ಞಾನ ಮಂದಿರಲ್ಲಿ ನಾಳೆ ರಾಷ್ಟ್ರೀಯ ಬಾಹ್ಯಾಕಾಶ ದಿನ ಕುರಿತ ಕಾರ್ಯಾಗಾರ ಆಯೋಜಿಸಲಾಗಿದೆ. ಐಐಎಸ್‌ಸಿ ಯ ಎ.ವಿ.ರಮಣರಾವ್ ಸಭಾಂಗಣದಲ್ಲಿ ಚಂದ್ರಯಾನ-೩ ಯಶಸ್ಸಿನ ಹಿನ್ನೆಲೆಯಲ್ಲಿ ಆಯೋಜಿಸಿರುವ ಕಾರ್ಯಾಗಾರಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಲಿದ್ದಾರೆ. ಚಂದ್ರಯಾನ-೩ ಯೋಜನೆಯಡಿ ಕಾರ್ಯ ನಿರ್ವಹಿಸಿದ್ದ ಇಸ್ರೋ ವಿಜ್ಞಾನಿ ಎಂ.ಶಂಕರನ್ ಸೇರಿ ಹಲವು ಗಣ್ಯರು ಕಾರ್ಯಾಗಾರದಲ್ಲಿ ಪಾಳ್ಗೊಳ್ಳಲಿದ್ದಾರೆ.

<><*<><>*><>

ಬಗರ್ ಹುಕುಂ ಅರ್ಜಿ ವಿಲೇವಾರಿಗೆ ಸೂಕ್ತಕ್ರಮ ಕೈಗೊಳ್ಳುವಂತೆ ಕಾಂದಾಯ ಸಚಿವ ಕೃಷ್ಣ ಭೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿಕಾಸಸೌಧದಲ್ಲಿಂದು ಬೆಂಗಳೂರು ವಿಭಾಗದ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಬಗರ್ ಹುಕುಂ ಅರ್ಜಿ ಕಾನೂನಿನ ಪ್ರಕಾರ ನ್ಯಾಯಸಮ್ಮತವಾಗಿದ್ದರೆ, ಫಲಾನುಭವಿಗಳಿಗೆ ಭೂಮಿ ಮಂಜೂರು ಮಾಡಬೇಕು. ಗೋಮಾಳ ಜಮೀನು ಮಂಜೂರಾತಿ ಬಗ್ಗೆ ಕಾನೂನು ಪುಸ್ತಕದಲ್ಲಿ ಸ್ಪಷ್ಟ ನಿರ್ದೇಶನಗಳಿವೆ. ಇವುಗಳನ್ನು ಪರಿಪಾಲಿಸುವಂತೆ ಅವರು ಕವಿಮಾತು ಹೇಳಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಕೆಲವೆಡೆ ಮೀಸಲು ಅರಣ್ಯ ಪ್ರದೇಶ ಒತ್ತುವರಿ ಮಾಡಿ ತೋಟ ಮಾಡಿರುವಂತಹ ಜಮೀನುಗಳ ಒತ್ತುವರಿ ಕಾರ್ಯಾಚರಣೆಯನ್ನು ಅರಣ್ಯ ಇಲಾಖೆ ಆರಂಬಿಸಿದೆ. ವಸ್ತಾರೆ ಮೀಸಲು ಅರಣ್ಯ ವಾಪ್ತಿಯ ಸರ್ವೆ ನಂ ೩೬೯ ರಲ್ಲಿ ೨೦ ಎಕರೆ ಕಾಫಿ ತೋಟ ತೆರವುಗೊಳಿಸಲಾಗಿದೆ. ಹಾಗೆ ಕಳಸ ತಾಲೂಕಿನ ಹೊರನಾಡು ಬಳಿಯ ಮೀಸಲು ಅರಣ್ಯದಲ್ಲಿ ಒತ್ತುವರಿ ಕಾಫಿ ತೋಟವನ್ನು ಕೂಡ ಇಂದಿನಿಂದ ತೆರವು ಮಾಡಲಾಗುತ್ತಿದೆ.

<><*<><>*><>

ಯುವನಿಧಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಒದಗಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿಯಲ್ಲಿ ಯುವನಿಧಿ ಯೋಜನೆಯ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಇಲ್ಲಿಯವರೆಗೂ ೪ ಸಾವಿರದ ೬೭೮ ಯುವಜನರು ನೋಂದಣಿ ಮಾಡಿಕೊಂಡಿದ್ದಾರೆ. ಇದರಲ್ಲಿ ೪ ಸಾವಿರದ ೮೩೦ ಫಲಾನುಭವಿಗಳಿಗೆ ಪುನರಾವರ್ತನೆ ಒಳಗೊಂಡಂತೆ ನೇರ ನಗದು ವರ್ಗಾವಣೆ ಮೂಲಕ ಜನವರಿ ತಿಂಗಳಿಂದ ಮೇ ತಿಂಗಳವರೆಗೆ ೧ ಕೋಟಿ ೪೪ ಲಕ್ಷ ರೂಪಾಯಿ ಜಮಾ ಮಾಡಲಾಗಿದೆ ಎಂದು ತಿಳಿಸಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬರಗಾಲದ ಸಮಯದಲ್ಲಿ ತೋಟಗಾರಿಕೆ ಬೆಳೆಗಳು ಒಣಗುವ ಸಮಯದಲ್ಲಿ ನಿರ್ಣಾಯಕ ಹಂತದ ನೀರುಣಿಸುವಿಕೆಯಿಂದ ಬೆಳೆಯನ್ನು ರಕ್ಷಿಸುವ ಅವಶ್ಯಕತೆ ಇರುವುದರಿಂದ, ನೀರು ಸಂಗ್ರಹಣಾ ಘಟಕಗಳನ್ನು ರಚಿಸಿಕೊಂಡು, ನೀರನ್ನು ಸದುಪಯೋಗಪಡಿಸಿಕೊಂಡು ಸಂಗ್ರಹಿಸುವುದು ಅತ್ಯವಶ್ಯಕವಾಗಿದೆ ಎಂದು ಜಿಲ್ಲಾ ತೋಟಗಾರಿಕಾ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ೨೦೨೪-೨೫ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ನೀರು ಸಂಗ್ರಹಣಾ ಘಟಕ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಫಲಾನುಭವಿ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಆಗಸ್ಟ್ ೩೧ ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ತೋಟಗಾರಿಕೆ ಇಲಾಖೆ ಉಪನಿರ್ದೇಶಕರ ಕಚೇರಿ ಅಥವಾ ಮೊಬೈಲ್ ಸಂಖ್ಯೆ ೯೪೪೮೯೯೨೧೪ ಕ್ಕೆ ಸಂಪರ್ಕಿಸಬಹುದಾಗಿದೆ.

<><*<><>*><>

<u>ಸಂಕ್ಷಿಪ್ತ ಸುದ್ದಿಗಳು</u>

೧. ವ್ಯವಹಾರ ಮತ್ತು ವಹಿವಾಟಿನಲ್ಲಿ ದಾವಣಗೆರೆ ಅಂಚೆ ವಿಭಾಗ ರಾಜ್ಯದಲ್ಲಿ ಉತ್ತಮ ಸಾಧನೆ ಮಾಡಿದೆ ಎಂದು ಅಂಚೆ ಅಧೀಕ್ಷಕ ಚಂದ್ರಶೇಖರ್ ಹೇಳಿದರು. ಹರಿಹರದ ಮುಖ್ಯ ಅಂಚೆಕಚೇರಿಯಲ್ಲಿ ಹಮ್ಮಿಕೊಂಡಿದ್ದ ಅಂಚೆ ಜನ ಸಂಪರ್ಕ ಅಭಿಯಾನದಲ್ಲಿ ಮಾತನಾಡಿದ ಅವರು, ಬ್ಯಾಂಕಿಂಗ್ ಮತ್ತಿತರೆ ಆರ್ಥಿಕ ಚಟುವಟಿಕೆ ನಡೆಸುವ ಮೂಲಕ ಅಂಚೆ ಇಲಾಖೆ ಜನರಿಗೆ ಹತ್ತಿರವಾಗುತ್ತದೆ ಎಂದರು.

೨. ಕೋಲಾರ ಜಿಲ್ಲೆಯ ಬಂಗಾರಪೇಟೆ ಪುರಸಭೆಯಲ್ಲಿ ೧೪ ತಿಂಗಳಿಂದ ಖಾಲಿ ಇರುವ ಪುರಸಭೆಯ ೧೦ನೇ ಅವಧಿಯ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯು ಆಗಸ್ಟ್ ೧೯ರಂದು ಪಟ್ಟಣದ ಪುರಸಭೆ ಕಚೇರಿಯಲ್ಲಿ ನಡೆಯಲಿದೆ ಎಂದು ಚುನಾವಣಾಧಿಕಾರಿ ಹಾಗೂ ತಹಶೀಲ್ದಾರ್ ಎಸ್. ವೆಂಕಟೇಶಪ್ಪ ತಿಳಿಸಿದ್ದಾರೆ.